ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಂಘ ಸಂಸ್ಥೆಗಳಿಗೆ ಪ್ರೋತ್ಸಾಹ ನೀಡುವ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು):-

897 (1092) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕನ್ನಡ ಮತ್ತು ಸಂಸ್ಕøತಿ ಇಲಾಖೆ ವತಿಯಿಂದ ಕಳೆÉದ 03 ವರ್ಷಗಳಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕನ್ನಡ ಮತ್ತು ಸಂಸ್ಕøತಿ ಇಲಾಖೆ ವತಿಯಿಂದ ಕಳೆದ 03 ವರ್ಷಗಳಲ್ಲಿ ವಿವಿಧ ಯೋಜನೆಗಳಡಿಯಲ್ಲಿ ನೀಡಿರುವ ಸಹಾಯಧನದಲ್ಲಿ ಎಷ್ಟು ಕಲಾವಿದರಿಗೆ ಯಾವ ಯಾವ ಯೋಜನೆಯಡಿ ಮಾಸಾಶನ ನೀಡಿದೆ ಹಾಗೂ ಎಷ್ಟು ಸಂಘ ಸಂಸ್ಥೆಗಳಿಗೆ/ನಾಟಕ ಮಂಡಳಿಗಳಿಗೆ ಸಹಾಯಧನ ನೀಡಿದೆ; ಬಯಲು ರಂಗಮಂದಿರಗಳು ಮತ್ತು ರಂಗಮಂದಿರಗಳ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಹಲವಾರು ವರ್ಷಗಳ ಹಿಂದೆ ನಿರ್ಮಿಸಿರುವ ಕಲಾಭವನಗಳು ಶಿಥಿಲಗೊಂಡು ತುರ್ತು ದುರಸ್ಥಿ ಕೈಗೊಳ್ಳಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜಿಲ್ಲಾ ಮಟ್ಟದಲ್ಲಿ ನಿರ್ಮಿಸಿರುವ ಕಲಾಭವನಗಳೆಷ್ಟು ; ಪ್ರಸ್ತುತದಲ್ಲಿ ಕಲಾಭವನ ಸುಸ್ಥಿತಿಯಲ್ಲಿವೆಯೇ ; ಒಂದುವೇಳೆ, ಸುಸ್ಥಿತಿಯಲ್ಲಿಲ್ಲದಿದ್ದಲ್ಲಿ ತುರ್ತಾಗಿ ದುರಸ್ಥಿಗೊಳಿಸಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)